ಡಿ.ಡಬ್ಲ್ಯೂ-1

<u>ದಿನಾಂಕ 07-01-2026 ರಂದು ಸಾಕ್ಷಿಯವರಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>
<u>ಮುಖ್ಯ ವಿಚಾರಣೆ :ಶ್ರೀ.ಡಿ.ಎಮ್.ಜೆ ವಕೀಲರಿಂದ ಪ್ರತಿವಾದಿ ಪರವಾಗಿ</u>

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರ ಸಲ್ಲಿಸಿದ್ದು, ಅದನ್ನು ತಯಾರಿಸಲು ಗೌರವಾನ್ವಿತ ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯಗಳು ಸರಿಯಾಗಿರುತ್ತವೆ ಮತ್ತು ಸತ್ಯವಾಗಿರುತ್ತವೆ ಎಂದು ಈ ಮೂಲಕ ಪ್ರಮಾಣಿಸಿಕರಿಸುತ್ತೇನೆ.

ನಾನು ಈಗ ಮುಟೇಶನ ಎಂಟ್ರಿ ಸಂಖ್ಯೆ 5647, 1666 ಗಳ ದೃಢೀಕೃತ ನಕಲುಗಳನ್ನು ಹಾಜರಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಡಿ-1 ಮತ್ತು ನಿಡಿ-2 ಎಂದು, ಸರ್ವೆ ನಂ.31/1(ಎ) ರ 1981-82 ರಿಂದ 2000-2001 ರವರೆಗಿನ ಕೈಬರಹ ಪಹಣಿ ಪತ್ರಿಕೆಗಳ ದೃಢೀಕೃತ ನಕಲು ಹಾಜರಪಡಿಸಿದ್ದು ಅದನ್ನು ನಿಡಿ-3 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯನ್ನು ವಜಾ ಮಾಡಬೇಕಾಗಿ ವಿನಂತಿ.

ವಾದಿ ಪರ ವಕೀಲರು ಹಾಜರ ಇದ್ದು, ಪಾಟೀ ಸವಾಲು ಮಾಡಲು ಸಮಯಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು. )
ಓ. ಹೇ. ಕೇ. ಸರಿ ಅದೆ.

ಸಹಿ/-

ಸಾಕ್ಷಿಯ ಸಹಿ

ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು
ಜೆ.ಎಂ.ಎಫ್.ಸಿ., ಮುಧೋಳ